## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ರಾಜ್ಯದಲ್ಲಿ ಕೋವಿಡ್-19 ರೋಗವು ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ 2020-21ನೇ ಸಾಲಿಗೆ ಕರ್ನಾಟಕ ಸೌಹಾರ್ದ ಸಹಕಾರ ಸಂಘಗಳ ವಾರ್ಷಿಕ ಸಾಮಾನ್ಯ ಸಭೆಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ:-
1. ಸರ್ಕಾರದ ಆದೇಶ ಸಂಖ್ಯೆ: ಸಿಓ 34 ಸಿಎಲ್ಎಂ 2020, ದಿನಾಂಕ: 17.04.2020.
2. ಸಹಕಾರ ಸಂಘಗಳ ನಿಬಂಧಕರು ಕರ್ನಾಟಕ ರಾಜ್ಯ ಬೆಂಗಳೂರು, ಇವರ ಪತ್ರ ಸಂಖ್ಯೆ: ಆರ್ ಸಿಎಸ್/ಸೌಹಾರ್ದ/ಅ.ನಿ.ತಿ/160/2017-18, ದಿನಾಂಕ:20.06.2020.

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಸೌಹಾರ್ದ ಸಹಕಾರ ಸಂಘಗಳ ಆರ್ಥಿಕ ತ:ಖ್ತೆಗಳನ್ನು ಸಿದ್ಧಪಡಿಸಿ ಆರ್ಥಿಕ ವರ್ಷ ಮುಗಿದ 30 ದಿನಗಳೊಳಗಾಗಿ ಲೆಕ್ಕಪರಿಶೋಧನೆಗೆ ಹಾಜರುಪಡಿಸಬೇಕಾದ ಅವಧಿಯನ್ನು ಜೂನ್ 30ರವರೆಗೆ ಹಾಗೂ ಲೆಕ್ಕಪರಿಶೋಧನೆ ಮಾಡಿಸಿಕೊಳ್ಳುವ ಅವಧಿಯನ್ನು 1ನೇ ಸೆಪ್ಟೆಂಬರ್ ರಿಂದ 1ನೇ ನವೆಂಬರ್ ರವರೆಗೆ 2020ನೇ ಸಾಲಿಗೆ ವಿಸ್ತರಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಪ್ರಸ್ತಾವನೆಯಲ್ಲಿ ರಾಜ್ಯದಲ್ಲಿ ಕೋವಿಡ್-19 ರೋಗವು ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ಪ್ರಕರಣ 27(ಹೆಚ್-3) , 30(1) ಹಾಗೂ 60(1)ರಡಿ ಸೆಪ್ಟೆಂಬರ್ ಇಪ್ಪತ್ತೈದರೊಳಗಾಗಿ ವಾರ್ಷಿಕ ಸಾಮಾನ್ಯ ಸಭೆಯನ್ನು ನಡೆಸತಕ್ಕದ್ದು ಎಂದು ನಿಗಧಿಪಡಿಸಿರುವ ಅವಧಿಯನ್ನು ಡಿಸೆಂಬರ್ ಇಪ್ಪತ್ತೈದರೊಳಗಾಗಿ ನಡೆಸಲು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 70ರಡಿ ಅವಧಿಯನ್ನು ವಿಸ್ತರಿಸುವಂತೆ ಸಹಕಾರ ಸಂಘಗಳ ನಿಬಂಧಕರು ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಇ 44 ಸಿಎಲ್ಎಮ್ 2020 (ಇ), ಬೆಂಗಳೂರು, ದಿನಾಂಕ: 08.07.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಕೋವಿಡ್-19 ರೋಗವು ವ್ಯಾಪಕವಾಗಿ ಹರಡುತ್ತಿರುವುದರಿಂದ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ಪ್ರಕರಣ 70ರಡಿ ಸರ್ಕಾರಕ್ಕೆ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ಪ್ರಕರಣ 27(ಹೆಚ್-3), 30(1) ಹಾಗೂ 60(1)ರಡಿ ವಾರ್ಷಿಕ ಸಾಮಾನ್ಯ ಸಭೆಯನ್ನು ಸೆಪ್ಟೆಂಬರ್

ಇಪ್ಪತ್ತೈದರೊಳಗಾಗಿ ನಡೆಸತಕ್ಕದ್ದು ಎಂಬುದನ್ನು ಸಡಿಲಿಸಿ, 25ನೇ ಡಿಸೆಂಬರ್ 2020ರೊಳಗಾಗಿ ನಡೆಸಲು ಅನುಮತಿ ನೀಡಿದೆ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 34 ಮತ್ತು 64ಎ ರೀತ್ಯಾ ವಿದ್ಯುಕ್ತ ವರದಿಗಳನ್ನು ಸಲ್ಲಿಸಲು 31ನೇ ಡಿಸೆಂಬರ್ 2020ರವರೆಗೆ ಅವಧಿಯನ್ನು ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಕೆ.ಎಂ. ಆಶಾ)**
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯಪತ್ರದಲ್ಲಿ ಕೂಡಲೇ ಪ್ರಕಟಿಸಿ ಅದರ 25 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು: -**

1. ಮಹಾಲೇಖಪಾಲರು, (ಜಿ & ಎಸ್‌ಎಸ್‌ಎ), (ಇ & ಆರ್‌ಎಸ್‌ಎ), (ಎ&ಇ) ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.
3. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ನಂ.17, ಜಯನಿವಾಸ, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು.
4. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
6. ಸಹಕಾರ ಸಂಘಗಳ ಜಂಟಿ ನಿಬಂಧಕರು/ಲೆಕ್ಕಪರಿಶೋಧನಾ ಜಂಟಿ ನಿಬಂಧಕರು ಬೆಂಗಳೂರು / ಮೈಸೂರು /ಕಲಬುರ್ಗಿ/ಬೆಳಗಾವಿ ಪ್ರಾಂತ .
7. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಉಪನಿಬಂಧಕರುಗಳಿಗೆ (ಸಹಕಾರ ಸಂಘಗಳ ನಿಬಂಧಕರ ಮೂಲಕ)
8. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕರುಗಳಿಗೆ (ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರ ಮೂಲಕ)
9. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ, 1ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ-3, ಸಹಕಾರ ಇಲಾಖೆ.
11. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿ.